ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMIOEST(3)/36/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 27.09.2021

## ಸುತ್ತೋಲೆ

**ವಿಷಯ :** 2021-22ನೇ ಶೈಕ್ಷಣಿಕ ಸಾಲಿನ ಬೆಸ ಸೆಮಿಸ್ಟರ್(Odd Semester) ಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಇಡಿ/14/ಡಿಟಿಇ/2021, ದಿನಾಂಕ: 18.06.2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯ, ಬೆಳಗಾವಿ ಇವರ 2021-22 ನೇ ಸಾಲಿನ ಬೆಸ ಸೆಮಿಸ್ಟರ್(Odd Semester) ನ ಶೈಕ್ಷಣಿಕ ವೇಳಾಪಟ್ಟಿಯಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರುಗಳನ್ನು ಪ್ರಾಂಶುಪಾಲರ ಹಂತದಲ್ಲಿ ನೇಮಕ ಮಾಡಿಕೊಳ್ಳಲು ಕೆಳಕಂಡ ಷರತ್ತು / ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಲಾಗಿದೆ.

**ಷರತ್ತು / ನಿಬಂಧನೆಗಳು:-**

1. ಸದರಿ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ದ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯತಕ್ಕದ್ದು;
2. ಈ ಹಿಂದೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವುದು;
3. ಅತಿಥಿ ಉಪನ್ಯಾಸಕರ ಸಂಖ್ಯೆಯನ್ನು ಕಡಿಮೆ ಮಾಡಬೇಕಾದ ಸಂದರ್ಭದಲ್ಲಿ, ಅತಿಥಿ ಉಪನ್ಯಾಸಕರಾಗಿ ಹೆಚ್ಚಿನ ಅವಧಿ ಸೇವೆ ಸಲ್ಲಿಸಿದವರಿಗೆ ಅವಕಾಶ ನೀಡಿ ಕಡಿಮೆ ಅವಧಿಯ ಸೇವೆ ಸಲ್ಲಿಸಿದವರನ್ನು ಕೈಬಿಡುವುದು;
4. ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಬೆಸ ಸೆಮಿಸ್ಟರ್(Odd Semester) ಗೆ ಮಾತ್ರ ನೇಮಕ ಮಾಡಿಕೊಳ್ಳತಕ್ಕದ್ದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ **(ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿರುವ ಬಗ್ಗೆ ಅನುಮೋದನೆಗಾಗಿ ಒಂದು ವಾರದೊಳಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ)**

ಪ್ರತಿ:-

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಆಪ್ತ ಶಾಖೆ, ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;

ಅನುಬಂಧ

**2020-21ನೇ ಶೈಕ್ಷಣಿಕ ಸಾಲಿನ ಬೆಸ ಸೆಮಿಸ್ಟರ್(Odd Semester) ಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ವಿವರ**

| ಕ್ರ.ಸಂ. | ಸಂಸ್ಥೆಯ ಹೆಸರು | ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯೆ |
|---|---|---|
| 1. | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 18 |
| 2. | ಸರ್ಕಾರಿ (ಸಂಜೆ) ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 08 |
| 3. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | 08 |
| 4. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | 15 |
| 5. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | 13 |
| 6. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ | 16 |
| 7. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | 08 |
| 8. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ | 09 |
| 9. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | 32 |
| 10. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ | 24 |
| 11. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 19 |
| 12. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | 43 |
| 13. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | 43 |
| 14. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಮೊಸಳೆಹೊಸಳ್ಳಿ | 23 |
| 15. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಳ್ಳಕೆರೆ | 06 |
| ಒಟ್ಟು | | **285** |

"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು